**All India Radio: Bangalore**
**Regional Bulletin In Kannada**
**09.01.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.01.2025 / 2.30 p.m.**
****************

ಮುಖ್ಯಾಂಶಗಳು

೧. ರಾಜ್ಯದಲ್ಲಿ ಕ್ಯಾನ್ಸರ್ ಪ್ರಮಾಣ ಹೆಚ್ಚಳ - ಅಧ್ಯಯನ ನಡೆಸುವಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಸೂಚನೆ

೨. ಬಳ್ಳಾರಿಯಲ್ಲಿ ಜೀನ್ಸ್ ಪಾರ್ಕ್ ಸ್ಥಾಪಿಸಲು ೧೫೪ ಎಕರೆ ಭೂಮಿ ಸ್ವಾಧೀನ - ಸಚಿವ ಎಂ.ಬಿ ಪಾಟೀಲ್

೩. ನಕ್ಸಲರ ಶರಣಾಗತಿ ಹಿನ್ನೆಲೆ ; ಶಸ್ತ್ರಾಸ್ತ್ರಗಳ ಬಗ್ಗೆ ಪೊಲೀಸ್ ಇಲಾಖೆಯಿಂದ ತನಿಖೆ

೪. ಬೆಂಗಳೂರಿನಲ್ಲಿ ೩ನೇ ದಿನಕ್ಕೆ ಕಾಲಿಟ್ಟ ಆಶಾ ಕಾರ್ಯಕರ್ತೆಯರ ಪ್ರತಿಭಟನೆ - ಬೇಡಿಕೆ ಈಡೇರಿಸುವಂತೆ ಬಿಜೆಪಿ ಆಗ್ರಹ

೫. ತಮಿಳುನಾಡಿನಲ್ಲಿ ಕೋಲಾರದಿಂದ ಓಂಶಕ್ತಿ ದೇವಾಲಯಕ್ಕೆ ತೆರಳಿದ್ದ ಬಸ್ ಅಪಘಾತ ; ಐವರು ಸಾವು

****************

ರಾಜೀವ್ ಗಾಂಧಿ ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ಹೆಚ್ಚುವರಿಯಾಗಿ ಸಂಗ್ರಹವಾಗಿರುವ ಮೊತ್ತವನ್ನು ಸರ್ಕಾರಿ ವೈದ್ಯಕೀಯ ಕಾಲೇಜುಗಳ ಮೂಲಸೌಲಭ್ಯಗಳಿಗಾಗಿ ಒದಗಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ಕೃಷ್ಣಾದಲ್ಲಿ ನಡೆದ ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನೆ ಸಭೆಯಲ್ಲಿ ಕ್ಯಾನ್ಸರ್ ಪ್ರಮಾಣ ಹೆಚ್ಚಳ ಕುರಿತು ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಕ್ಯಾನ್ಸರ್ ಚಿಕಿತ್ಸೆಗೆ ಅಂತಾರಾಷ್ಟ್ರೀಯ ಗುಣಮಟ್ಟದ ಚಿಕಿತ್ಸೆ ರಾಜ್ಯದಲ್ಲಿಯೇ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದ್ದಾರೆ.

೨೦೨೪-೨೫ ನೇ ಸಾಲಿನಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಗೆ ೪ ಸಾವಿರದ ೩೩೧ ಕೋಟಿ ಅನುದಾನ ಹಂಚಿಕೆ ಮಾಡಲಾಗಿದ್ದು, ಇದುವರೆಗೆ ೩ ಸಾವಿರದ ೯೯ ಕೋಟಿ ಅನುದಾನ ಬಿಡುಗಡೆಯಾಗಿದೆ. ಇದರಲ್ಲಿ ೩ ಸಾವಿರದ ೫ ಕೋಟಿ ವೆಚ್ಚ ಮಾಡಲಾಗಿದೆ ಎಂದು ಹೇಳಿದ್ದಾರೆ. ಗದಗ, ಕೊಪ್ಪಳ, ಕಾರವಾರ, ಕೊಡಗು ಜಿಲ್ಲೆಗಳಲ್ಲಿ ನಿರ್ಮಾಣ ಹಂತದಲ್ಲಿರುವ ೪೫೦ ಹಾಸಿಗೆ ಆಸ್ಪತ್ರೆಗಳ ನಿರ್ಮಾಣವನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ  ನೀಡಿದ್ದಾರೆ.

*****************

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಭಾರತ್ ಜೋಡೋ ಯಾತ್ರೆ ಸಂದರ್ಭದಲ್ಲಿ ಬಳ್ಳಾರಿಯಲ್ಲಿ ನೀಡಿದ್ದ ಭರವಸೆಯಂತೆ ಬಳ್ಳಾರಿಯ ಸಂಜೀವರಾಯನ ಕೋಟೆಯಲ್ಲಿ ಕೆಐಎಡಿಬಿ ವತಿಯಿಂದ ‘ಜೀನ್ಸ್ ಪಾರ್ಕ್’ ಸ್ಥಾಪಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ.

ಈಗಾಗಲೇ ೧೫೪ ಎಕರೆ ಜಮೀನನ್ನು ಸ್ವಾಧೀನಪಡಿಸಲಾಗಿದ್ದು, ಇಲ್ಲಿ ಅಂತಾರಾಷ್ಟ್ರೀಯ ಮಟ್ಟದ ಜೀನ್ಸ್ ಉಡುಪು ತಯಾರಿಕಾ ಕಂಪನಿ ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

ಬಳ್ಳಾರಿಯಲ್ಲಿ ೫೦೦ಕ್ಕಿಂತಲೂ ಹೆಚ್ಚು ಜೀನ್ಸ್ ಉಡುಪು ತಯಾರಿಕೆ ಘಟಕಗಳಿದ್ದು, ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಹತ್ತಾರು ಸಾವಿರ ಉದ್ಯೋಗಗಳನ್ನು ಸೃಷ್ಟಿಸಿವೆ. ಇದಕ್ಕೆ ವ್ಯವಸ್ಥಿತ ರೂಪ ಕೊಟ್ಟು, ಇದನ್ನು ರಫ್ತು ಕೇಂದ್ರಿತವಾಗಿಯೂ ಬೆಳೆಸಬೇಕು ಎನ್ನುವುದು ಕೈಗಾರಿಕಾ ಇಲಾಖೆಯ ಚಿಂತನೆಯಾಗಿದೆ ಎಂದು ಹೇಳಿದ್ದಾರೆ.\

ಇದಕ್ಕಾಗಿ ಜವಳಿ ಇಲಾಖೆಯ ಸಹಾಯವನ್ನೂ ಪಡೆಯಲಾಗುವುದು ಎಂದು ತಿಳಿಸಿದ್ದಾರೆ.  ಬಳ್ಳಾರಿ ಸುತ್ತಮುತ್ತ ಸಕ್ರಿಯವಾಗಿರುವ ಜೀನ್ಸ್ ಉಡುಪು ತಯಾರಿಕೆ ಘಟಕಗಳಿಗೂ ಹೆಚ್ಚಿನ ನೆರವು ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

*****************

ನಕ್ಸಲರು ಮುಖ್ಯಮಂತ್ರಿಯವರ ಕಚೇರಿಗೆ ಬಂದು ಶರಣಾಗಿರುವುದರಲ್ಲಿ ತಪ್ಪೇನಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಕ್ಸಲರ ಮನ ಪರಿವರ್ತನೆಗೆ ಸರ್ಕಾರ ಅವಕಾಶ ಕೊಟ್ಟಿದೆ. ನಕ್ಸಲರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಸರ್ಕಾರದ ಮುಂದೆ ಶರಣಾಗಿದ್ದಾರೆ. ಶಸ್ತ್ರಾಸ್ತ್ರಗಳನ್ನು ಎಲ್ಲಿ ಎಸೆದು ಬಂದಿದ್ದಾರೆ ಎಂಬುದರ ಕುರಿತು ಪೊಲೀಸ್ ಇಲಾಖೆಯಿಂದ ತನಿಖೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ಪರಮೇಶ್ವರ್

ಇದೇ ವೇಳೆ ಪಕ್ಷದಲ್ಲಿ ಯಾವ ಗೊಂದಲವೂ ಇಲ್ಲ ಎಂದು ಹೇಳಿದ್ದಾರೆ. ಪರಿಶಿಷ್ಟ ಸಮುದಾಯದ ಸಮಾವೇಶದ ಕುರಿತು ಕರೆದಿದ್ದ ಸಭೆ ಮುಂದೂಡಲು ಅನೇಕ ಕಾರಣಗಳಿವೆ ಎಂದು ಸ್ಪಷ್ಟಪಡಿಸಿದ್ದಾರೆ.

*****************

ರಾಜ್ಯದಲ್ಲಿ ನಿನ್ನೆ ಶರಣಾದ ನಕ್ಸಲರನ್ನು ಇಂದು ರಾಷ್ಟ್ರೀಯ ತನಿಖಾ ಸಂಸ್ಥೆ ವಿಶೇಷ ನ್ಯಾಯಾಲಯದ ಮುಂದೆ ಹಾಜರುಪಡಿಸುವ ಸಾಧ್ಯತೆ ಇದೆ.  ಈ ನಡುವೆ ಶರಣಾದ ಮಾವೋವಾದಿಗಳ ತನಿಖೆಗಾಗಿ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ವಿಭಾಗದ ಉಪ ಪೊಲೀಸ್ ವರಿಷ್ಠಾಧಿಕಾರಿ ಬಾಲಾಜಿ ಸಿಂಗ್ ಅವರನ್ನು ನಿಯೋಜಿಸಲಾಗಿದೆ. ಸರ್ಕಾರದ ಮುಂದೆ ಶರಣಾದಾಗ ನಕ್ಸಲರು ಶಸ್ತ್ರಾಸ್ತ್ರಗಳನ್ನು ತ್ಯಜಿಸಿರಲಿಲ್ಲ. ಸಾಂಕೇತಿಕವಾಗಿ ಶರಣಾಗಿರುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಇಂದು ಅವರಿಂದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಿದ್ದಾರೆ.

ಮುಂಡಗಾರು ಲತಾ, ೮೫ ಪ್ರಕರಣಗಳನ್ನು ಎದುರಿಸುತ್ತಿದ್ದು, ಸುಂದರಿ ೭೧, ಮಾರಪ್ಪ ಅರೋಲಿ ೫೦, ವನಜಾಕ್ಷಿ ೨೯, ವಸಂತ ೮ ಮತ್ತು ಜೀಶಾ ೧೧ ಪ್ರಕರಣಗಳನ್ನು ಎದುರಿಸುತ್ತಿದ್ದಾರೆ. ನಕ್ಸಲರ ಶರಣಾಗತಿ ಮತ್ತು ಪುನರ್ವಸತಿ ಯೋಜನೆ ಅಡಿಯಲ್ಲಿ ಪ್ರತಿಯೊಬ್ಬರಿಗೆ ಮೂರು ಲಕ್ಷ ರೂಪಾಯಿ ಬಿಡುಗಡೆ ಮಾಡಲು ಚಿಕ್ಕಮಗಳೂರು ಜಿಲ್ಲಾ ಮ್ಯಾಜಿಸ್ಟ್ರೇಟ್ ಕಚೇರಿ ಆದೇಶಿಸಿದೆ.

*****************

ಗೌರವ ಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಆಶಾಕಾರ್ಯಕರ್ತೆಯರು ಇಂದು ಕೂಡ ಪ್ರತಿಭಟನೆ ಮುಂದುವರಿಸಿದ್ದಾರೆ. ಕೂಡಲೇ ಆಶಾ ಕಾರ್ಯಕರ್ತೆಯರ ಬೇಡಿಕೆಗಳನ್ನು ಈಡೇರಿಸುವಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಅಧಿಕಾರಕ್ಕೆ ಬರುವ ಮೊದಲು ಆಶಾ ಕಾರ್ಯಕರ್ತೆಯರಿಗೆ ಬೆಟ್ಟದಷ್ಟು ಆಶ್ವಾಸನೆ ನೀಡಿದ್ದ ಸರ್ಕಾರ ಅಧಿಕಾರಕ್ಕೆ ಬಂದು ವರ್ಷ ಕಳೆದರೂ, ಬೇಡಿಕೆ ಈಡೇರಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಶಾ ಕಾರ್ಯಕರ್ತೆಯರ ಬಗ್ಗೆ ಗಮನಹರಿಸದ ಸರ್ಕಾರ ಇದಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ದೂರಿದ್ದಾರೆ.

*****************

ಪೊಂಗಲ್ ಹಾಗೂ ಮಕರ ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿವಾರಿಸಲು ನೈಋತ್ಯ ರೈಲ್ವೆ ಬೆಂಗಳೂರಿನ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಮತ್ತು ಕಲಬುರಗಿ ನಿಲ್ದಾಣಗಳ ನಡುವೆ ಪ್ರತಿ ದಿಕ್ಕಿನಲ್ಲಿ ಮೂರು ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲುಗಳನ್ನು ಓಡಿಸಲು ನಿರ್ಧರಿಸಿದೆ.

ಈ ವಿಶೇಷ ರೈಲು ೧೬ ೨ನೇ ದರ್ಜೆ ಸ್ಲೀಪರ್ ಬೋಗಿಗಳು ಸೇರಿದಂತೆ ೧೮ ಬೋಗಿಗಳನ್ನು ಒಳಗೊಂಡಿರುತ್ತದೆ.

ಈ ರೈಲುಗಳ ಪ್ರತಿ ನಿಲ್ದಾಣದ ಆಗಮನ, ನಿರ್ಗಮನ ಸಮಯಕ್ಕಾಗಿ, ಪ್ರಯಾಣಿಕರು ಭಾರತೀಯ ರೈಲ್ವೆ ಜಾಲತಾಣಕ್ಕೆ ಭೇಟಿ ನೀಡಿ ಅಥವಾ ಸಹಾಯವಾಣಿ ೧೩೯ಕ್ಕೆ ಕರೆ ಮಾಡುವ ಮೂಲಕ ಮಾಹಿತಿ ಪಡೆದುಕೊಳ್ಳಬಹುದು.

*****************

ತಮಿಳುನಾಡಿನ ರಾಣಿಪೇಟೆ ಬಳಿ ಕೋಲಾರದಿಂದ ಓಂ ಶಕ್ತಿ ದೇವಾಲಯಕ್ಕೆ ತೆರಳಿದ್ದ ಮಾಲಾಧಾರಿ'ಗಳಿದ್ದ ಕೆಎಸ್ಆರ್‌ಟಿಸಿ ಬಸ್ ಮತ್ತು ಕ್ಯಾಂಟರ್ ನಡುವೆ ಅಪಘಾತ ಸಂಭವಿಸಿ, ಐವರು ಮೃತಪಟ್ಟಿದ್ದಾರೆ.

ಮೃತರು ಕೋಲಾರದ ಶ್ರೀನಿವಾಸಪುರ ತಾಲೂಕಿನ ಸೀಗೆಹಳ್ಳಿ ಗ್ರಾಮದ ನಿವಾಸಿಗಳಾದ ಮಂಜುನಾಥ್, ಶಂಕರ್, ಸೋಮಶೇಖರ್, ಕೃಷ್ಣಪ್ಪ ಹಾಗೂ ಕೆಎಸ್ಆರ್‌ಟಿಸಿ ಬಸ್ ಚಾಲಕ ಎಂದು ಗುರುತಿಸಲಾಗಿದೆ. ಕೆಎಸ್ಆರ್‌ಟಿಸಿ ಬಸ್‌ನಲ್ಲಿದ್ದ ನಲ್ಲೂರು ಗ್ರಾಮದ ಸ್ವರಸ್ವತಿ ಎಂಬುವವರ ಸ್ಥಿತಿ ಗಂಭೀರವಾಗಿದೆ.

ಗಾಯಗೊಂಡವರನ್ನು ವೇಲೂರಿನ ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ನೀಡಲಾಗುತ್ತಿದೆ. ತಮಿಳುನಾಡಿನ ರಾಣಿಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

*****************

ಕೇಂದ್ರ ಗೃಹ ಸಚಿವ ಅಮಿತ್ ಶಾ ಡಾ. ಬಿ.ಆರ್.ಅಂಬೇಡ್ಕರ್ ಅವರ ವಿರುದ್ಧ ಹೇಳಿಕೆ ನೀಡಿರುವುದನ್ನು ಖಂಡಿಸಿ ಹುಬ್ಬಳ್ಳಿಯಲ್ಲಿ ದಲಿತ ಸಂಘಟನೆಗಳು ಕರೆ ನೀಡಿದ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಚೆನ್ನಮ್ಮ ವೃತ್ತ ಸೇರಿದಂತೆ ಹಲವೆಡೆ ಅಂಗಡಿ-ಮುಂಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಸಾರಿಗೆ ಹಾಗೂ ಆಟೋ ಸಂಚಾರ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಪ್ರಯಾಣಿಕರು ರೈಲ್ವೆ ನಿಲ್ದಾಣದಿಂದ ನಡೆದುಕೊಂಡು ಮನೆಗೆ ತೆರಳುತ್ತಿದ್ದ ದೃಶ್ಯ ಕಂಡು ಬಂದಿತು.

ನಗರದ ಕೆಲವೆಡೆ ದಲಿತ ಸಂಘಟನೆಯ ಮುಖಂಡರು ರಸ್ತೆ ತಡೆ ನಡೆಸಿದರು. ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.

*****************

ಚಳಿಗಾಲದಲ್ಲಿ ಸಹಜವಾಗಿ ಮಕ್ಕಳನ್ನು ಕಾಡುವ ಹೆಚ್ ಎಂ ಪಿ ವೈರಾಣುವಿನ ಬಗ್ಗೆ ಹೆಚ್ಚಿನ ಆತಂಕಪಡುವ ಅಗತ್ಯವಿಲ್ಲ. ಆದರೆ, ಮುನ್ನೆಚರಿಕೆ ಅಗತ್ಯ ಎಂದು ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯ ಮಕ್ಕಳ ತಜ್ಞರಾದ ಡಾ.ಸುಜಾತ ಹಾಗೂ ಡಾ.ರಚನ್ ತಿಳಿಸಿದ್ದಾರೆ.

***ಧ್ವನಿ*** ಡಾ.ರಚನ್

***ಧ್ವನಿ*** ಡಾ.ಸುಜಾತ

ಸರ್ಕಾರಿ ಆಸ್ಪತ್ರೆಯಲ್ಲಿ ಹೆಚ್.ಎಂ.ಪಿ ವೈರಾಣು ತಡೆಗೆ ಉಚಿತ ಚಿಕಿತ್ಸೆ ಲಭ್ಯವಿದೆ. ಮಾಸ್ಕ್ ಧರಿಸುವುದು,ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು, ವೈಯಕ್ತಿಕ ಸ್ವಚ್ಛತೆಗೆ ಒತ್ತು ಕೊಡುವುದು, ಬಿಸಿ ನೀರು ಮತ್ತು ಬಿಸಿ ಆಹಾರ ಸೇವಿಸುವುದು ಹಾಗೂ ಕೈಕಾಲುಗಳನ್ನು ಸೋಪಿನಿಂದ ತೊಳೆಯುವ ಮೂಲಕವೂ ಈ ವೈರಾಣುವನ್ನು ನಿಯಂತ್ರಿಸಲು ಸಾಧ್ಯವಿದೆ ಎಂದು ಅವರು ಹೇಳಿದ್ದಾರೆ.

*****************

ಬೆಂಗಳೂರಿನ  ಮಾಣೆಕ್ ಷಾ ಪರೇಡ್ ಮೈದಾನದಲ್ಲಿ ಭಾರತೀಯ ಸೇನೆ ಇದೇ ಶನಿವಾರ "ನಿಮ್ಮ ಸೇನೆಯನ್ನು ತಿಳಿಯಿರಿ" ಮೇಳ ಆಯೋಜಿಸಿದೆ.

ಭಾರತೀಯ ಸೇನೆ ಈ ಒಂದು ದಿನದ ಸಾಹಸ, ಸಾಂಸ್ಕೃತಿಕ ಮತ್ತು ಸೇನಾ ಸಾಧನಗಳ ಪ್ರದರ್ಶನದಲ್ಲಿ ಭಾಗವಹಿಸುವಂತೆ ಬೆಂಗಳೂರಿಗರನ್ನು ಆಹ್ವಾನಿಸಿದೆ.

ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮವು ಎಲ್ಲರಿಗೂ ಮುಕ್ತವಾಗಿದ್ದು, ಉಚಿತ ಪ್ರವೇಶದೊಂದಿಗೆ ನಮ್ಮ ಗಡಿಗಳನ್ನು ರಕ್ಷಿಸುವ ಸೈನಿಕರೊಂದಿಗೆ ಸಂವಹನ ನಡೆಸಲು ಮತ್ತು ಅವರ ಜೀವನವನ್ನು ಅರ್ಥಮಾಡಿಕೊಳ್ಳಲು ಒಂದು ವೇದಿಕೆಯನ್ನು ಒದಗಿಸಲಿದೆ.

********ಮುಕ್ತಾಯ********